ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

BENGALURU
CITY UNIVERSITY

Office of the Registrar, Central College Campus, Dr. B.R. Ambedkar Veedhi, Bengaluru – 560 001.
Ph.No.080-22131385, E-mail: registrar@bcu.ac.in

ಸಂಖ್ಯೆ: ಬೆಂ.ನ.ವಿ/ಎ.ಸಿ.ಎ/ ಹೊಸ ಸ್ವಾಯತ್ತ ಸಂಯೋಜನೆ/247/2025–26 ದಿನಾಂಕ: 13.10.2025

## ಅಧಿಸೂಚನೆ

ವಿಷಯ: ಇಂಟರ್ ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಬಿಸಿನೆಸ್ ಸ್ಟಡೀಸ್ 2025–26 ರಿಂದ 2034–35 ನೇ ಸಾಲಿನವರೆಗೆ 10 ವರ್ಷಗಳ ವರೆಗೆ ಹೊಸ ಸ್ವಾಯತ್ತತೆಯ ಮಾನ್ಯತೆ ನೀಡುವ ಕುರಿತು.

ಉಲ್ಲೇಖ:
1. ವಿಶ್ವವಿದ್ಯಾಲಯಗಳ ಧನ ಸಹಾಯ ಆಯೋಗದ ಪತ್ರ ಸಂ. No.F-2-10/2023(AC-Policy) Dated: 10.06.2025
2. ಸರ್ಕಾರದ ಪತ್ರ ಸಂಖ್ಯೆ: ಇಡಿ 410 ಯುಬಿವಿ 2025 ದಿನಾಂಕ: 10.10.2025
3. ವಿದ್ಯಾವಿಷಯಕ ಪರಿಷತ್ ಶಿಫಾರಸ್ಸು ದಿನಾಂಕ: 09.07.2025
4. ಸಿಂಡಿಕೇಟ್ ನಿರ್ಣಯ ದಿನಾಂಕ: 29.07.2025
5. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 13.10.2025

*****

ಉಲ್ಲೇಖ (1)ರ ವಿಶ್ವವಿದ್ಯಾಲಯಗಳ ಧನ ಸಹಾಯ ಆಯೋಗದ ಪತ್ರದಲ್ಲಿ ಬೆಂಗಳೂರಿನ ಇಂಟರ್ ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಬಿಸಿನೆಸ್ ಸ್ಟಡೀಸ್ ಮಹಾವಿದ್ಯಾಲಯಕ್ಕೆ 2025–26ನೇ ಸಾಲಿನಿಂದ 2034–35ನೇ ಸಾಲಿನ ವರೆಗೆ 10 ವರ್ಷಗಳ ಅವಧಿಗೆ ಸ್ವಾಯತ್ತತೆ ಕಾಲೇಜಿನ ಮಾನ್ಯತೆ ನೀಡಿರುತ್ತದೆ. ಇದನ್ನು ಅನುಸರಿಸಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ 64(3)ನೇ ಪ್ರಕರಣ ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯದ ಸ್ವಾಯತ್ತ ಕಾಲೇಜು/ಸಂಸ್ಥೆ ಪರಿನಿಯಮ 2005 ಪ್ರಕರಣ 4.8 ರಡಿಯಲ್ಲಿ ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ವಿದ್ಯಾವಿಷಯಕ ಪರಿಷತ್ ಮತ್ತು ಸಿಂಡಿಕೇಟ್ ಸಭೆಗಳ ಈ ಮಹಾವಿದ್ಯಾಲಯಕ್ಕೆ ಸ್ಥಾನಮಾನ ನೀಡಲು ಉಲ್ಲೇಖ 3 ಮತ್ತು 4ರಂತೆ ಶಿಫಾರಸ್ಸು ಮಾಡಿರುತ್ತವೆ. ಈ ಶಿಫಾರಸ್ಸಿನ ಅನ್ವಯ ರಾಜ್ಯ ಸರ್ಕಾರವು ಉಲ್ಲೇಖ (2)ರ ಪತ್ರದಲ್ಲಿ ಈ ಕಾಲೇಜಿಗೆ ಸ್ವಾಯತ್ತ ಸ್ಥಾನಮಾನ ನೀಡಲು ಸಹಮತಿಯನ್ನು ವ್ಯಕ್ತಪಡಿಸಿರುತ್ತದೆ.

ರಾಜ್ಯ ಸರ್ಕಾರ ನೀಡಿರುವ ಸಹಮತದ ಆಧಾರದ ಮೇಲೆ ನಗರದ ಇಂಟರ್ ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಬಿಸಿನೆಸ್ ಸ್ಟಡೀಸ್ ಮಹಾವಿದ್ಯಾಲಯಕ್ಕೆ 2025–26ನೇ ಸಾಲಿನಿಂದ 2034–35ನೇ ಸಾಲಿನ ವರೆಗೆ 10 ವರ್ಷಗಳ ವರೆಗೆ ಹೊಸ ಸ್ವಾಯತ್ತತೆ ಮಾನ್ಯತೆ ನೀಡಿ ಕೆಳಕಂಡ ಕೋರ್ಸು/ವಿಷಯಗಳು ಹಾಗೂ ಪ್ರವೇಶ ಸಂಖ್ಯೆಗೆ ಹೊಸ ಸ್ವಾಯತ್ತತೆ ಸ್ಥಾನಮಾನ ನೀಡಿ ಸಂಯೋಜನೆ ನೀಡಲಾಗಿದೆ.

| ಕೋರ್ಸು | ವಿಷಯ | ಹೊಸ ಕೋರ್ಸು / ವಿದ್ಯಾರ್ಥಿ ಪ್ರಮಾಣ | |
|---|---|---|---|
| ಬಿ.ಎ | ಅರ್ಥಶಾಸ್ತ್ರ, ಇತಿಹಾಸ, ರಾಜ್ಯಶಾಸ್ತ್ರ | 60 | 1 Section |
| ಬಿ.ಕಾಂ | ಸಾಮಾನ್ಯ | 60 | 1 Section |
| ಬಿ.ಬಿ.ಎ. | ಸಾಮಾನ್ಯ | 60 | 1 Section |
| ಬಿ.ಸಿ.ಎ | ಸಾಮಾನ್ಯ | 60 | 1 Section |

| | | | |
|---|---|---|---|
| ಎಂ.ಬಿ.ಎ | ಸಾಮಾನ್ಯ | 360 | 6 Section |

**ಷರತ್ತುಗಳು:**

1. ಸದರಿ ಮಹಾವಿದ್ಯಾಲಯದಲ್ಲಿ 2025–26ನೇ ಸಾಲಿಗೆ 3 ರಿಂದ 5ನೇ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳು ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಪರಿನಿಯಮಾವಳಿ ಹಾಗೂ ಪಠ್ಯಕ್ರಮಗಳ ಪ್ರಕಾರ ವ್ಯಾಸಂಗ ಮುಂದುವರೆಸತಕ್ಕದ್ದು
2. 2025–26ನೇ ಸಾಲಿಗೆ ಮಹಾವಿದ್ಯಾಲಯದಲ್ಲಿ ಈಗಾಗಲೇ ಪ್ರಥಮ ಸೆಮಿಸ್ಟರ್‌ಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ವಿಶ್ವವಿದ್ಯಾನಿಲಯ ಅನುಮೋದಿಸಿರುವ ಪಠ್ಯಕ್ರಮಗಳನ್ನು ಮಹಾವಿದ್ಯಾಲಯ ತನ್ನ ಸ್ವಾಯತ್ತ ವ್ಯಾಸಂಗಕ್ಕಾಗಿ ಅಳವಡಿಸಿಕೊಂಡು ಈ ಕುರಿತು ಆಡಳಿತ ಮಂಡಳಿ ಮುಚ್ಚಳಿಕೆ ಪತ್ರ ನೀಡುವ ಷರತ್ತಿಗೆ ಒಳಪಟ್ಟಿರುತ್ತದೆ ಹಾಗೂ ಸೂಕ್ತ ಪ್ರಾಧಿಕಾರಗಳ ರಚನೆಯಾದ ನಂತರ ಈ ಕ್ರಮದ ಅನುಸಮರ್ಥನೆ ಪಡೆಯಲು ಸೂಚಿಸಲಾಗಿದೆ.
3. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿಗೆ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅವುಗಳನ್ನು ಶಾಶ್ವತ ಅನುದಾನ ರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು.
4. ಜಾರಿಯಲ್ಲಿರುವ ಸರ್ಕಾರದ ಅಧಿನಿಯಮ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ಸದರಿ ಪದವಿ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ವಿಭಾಗ/ಪ್ರವೇಶ ಸಂಖ್ಯೆಗಳನ್ನು ಹೆಚ್ಚಿಸಬಾರದು.
6. ತಜ್ಞರ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ 15 ದಿವಸಗಳ ಒಳಗಾಗಿ ಕಳುಹಿಸತಕ್ಕದ್ದು.
7. ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ರೋಸ್ಟರ್ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
8. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
9. ವೈಶಾಕ v/s ರಾಜಸ್ಥಾನ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ / ವಿದ್ಯಾರ್ಥಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವೆರಡರಲ್ಲಿ ಯಾವುದು ಮೊದಲೋ ಆ ದಿನಾಂಕದ ನಂತರ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ.

11. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು, ಬೋಧಕರುಗಳನ್ನು ಪ್ರಾಂಶುಪಾಲರು / ಆಡಳಿತ ಮಂಡಳಿಯವರು ವಿದ್ಯಾರ್ಥಿಗಳನ್ನು ಸಹಾನಿಭೂತಿಯಿಂದ ನೋಡಿಕೊಳ್ಳತಕ್ಕದ್ದು.
12 ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ. ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೇ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ / ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
14. ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರಿಗೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ವಿಶ್ವವಿದ್ಯಾಲಯದ ಸ್ವಾಯತ್ತ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ಪ್ರವೇಶಕ್ಕೆ ನಿಗಧಿಪಡಿಸಿದ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಆಯಾಯ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಗಂಭೀರವಾಗಿ ಪರಿಗಣಿಸಿ ಸ್ವಾಯತ್ತತೆಯನ್ನು ರದ್ದುಪಡಿಸಲು ಕ್ರಮವಹಿಸಲಾಗುವುದು.
15. ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯವು ಪ್ರವೇಶಾತಿಗೆ ನಿಗಧಿಪಡಿಸಿದ ಅಂತಿಮ ದಿನಾಂಕದ ನಂತರ ಯಾವುದೇ ವಿದ್ಯಾರ್ಥಿಯ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದಲ್ಲ.

ಆಜ್ಞೆ ಮೇರೆಗೆ

ಕುಲಸಚಿವರು.

Registrar
Bengaluru City University
Central College Campus,
Bengaluru - 560001.

ಗೆ,
ಪ್ರಾಂಶುಪಾಲರು,
ಇಂಟರ್ ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಬಿಸಿನೆಸ್ ಸ್ಟಡೀಸ್,
ಸಂಖ್ಯೆ 75, ಮುತ್ತುಗದ ಹಳ್ಳಿ, ಜಾಲ ಹೋಬಳಿ,
ಬೆಂಗಳೂರು ಉತ್ತರ, ಬೆಂಗಳೂರು– 562157

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು– 560 001.
3. ಕುಲಸಚಿವರು (ಮೌಲ್ಯಮಾಪನ) ಬೆಂ.ನ.ವಿ.
4. ಕುಲಪತಿಗಳು/ಕುಲಸಚಿವರು/ವಿತ್ತಾಧಿಕಾರಿಗಳ ಆಪ್ತ ಕಾರ್ಯಾಲಯ, ಬೆಂ.ನ.ವಿ
5. ಕಛೇರಿ ಕಡತ